ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಂ ಆರ್ ಎಸ್ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ವಂಶವೃಕ್ಷವನ್ನು ನಿಪಿ-1 ಎಂದು, ದಾವಾ ಆಸ್ತಿಯ 3 ಪಹಣಿ ಪತ್ರಿಕೆಗಳನ್ನು ನಿಪಿ-2 ರಿಂದ ನಿಪಿ-4 ಎಂದು, ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಅಂಕಪಟ್ಟಿಗಳನ್ನು ನಿಪಿ-5 ಮತ್ತು ನಿಪಿ-6 ಎಂದು, ಒಂದು ಪಾಸ್ ಪೋರ್ಟ್ ಅನ್ನು ನಿಪಿ-7 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ

4 ನೇ ಪ್ರತಿವಾದಿ ಹಾಜರಿದ್ದು ಅವರ ಪರ ವಕೀಲರು ಗೈರು ಹಾಜರಾಗಿದ್ದು ಲಿಖಿತ ಹೇಳಿಕೆ ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.